**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆ2279-2021**

**ಸಿ.ಡಬ್ಲ್ಯೂ -3, ಪಿ.ಡಬ್ಲ್ಯೂ -3**

| | | |
|---|---|---|
| ಸಾಕ್ಷಿದಾರರ ಹೆಸರು | : | ಸವಿತಾ |
| ಗಂಡನ ಹೆಸರು | : | ಈಶ್ವರ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸ | : | ಕಾಗೋಡು ಗ್ರಾಮ, ಸಾಗರ ತಾಲ್ಲೂಕು. |

**ದೃಶ್ಯ ಸಮ್ಮೇಳನದ ಮೂಲಕ ಕರೆಯಿಸಿ ಪ್ರಮಾಣೀಕರಿಸಿದ**
**ದಿನಾಂಕ : 08.06.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಚಾಸ 1 ನನ್ನ ಗಂಡ. ಚಾಸ 2 ಮತ್ತು 5 ರವರ ಪರಿಚಯವಿದೆ, ಅವರು ನಮ್ಮ ಊರಿನವರೇ. ಆರೋಪಿತರ ಪರಿಚಯವಿದೆ, ಅವರು ನಮ್ಮ ಊರಿನವರು. ಆರೋಪಿತರು ಮತ್ತು ನಮ್ಮ ನಡುವೆ ಯಾವುದೇ ಜಗಳವಾಗಿರುವುದಿಲ್ಲ. ಆರೋಪಿತರು ನಮಗೆ ಹೊಡಿ ಬಡಿ ಮಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ ಮತ್ತು ಜೀವ ಬೆದರಿಕೆ ಹಾಕಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ದಂಡ ಪ್ರಕ್ರಿಯಾ ಸಂಹಿತೆ ಕಲಂ 161 ರ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ದಿಃ27.01.2021 ರಂದು ರಾತ್ರಿ 7.30 ರ ಸಮಯದಲ್ಲಿ ಕಾಗೋಡು ಗ್ರಾಮದ ಕನ್ನಪ್ಪ ರವರ ಮನೆಯ ಎದುರು ರಸ್ತೆಯಲ್ಲಿ ಚಾಸ 1 ಗ್ರಾಮದ ದೇವಸ್ಥಾನದ ಹತ್ತಿರ ನಡೆಯುತ್ತಿರುವ ಸಭೆಗೆ ಹೋಗುತ್ತಿದ್ದಾಗ 1 ರಿಂದ 4ನೇ ಆರೋಪಿತರು ಗ್ರಾಮ ಪಂಚಾಯಿತಿ ಚುನಾವಣೆ ದ್ವೇಷದ ಹಿನ್ನಲೆ ಚಾಸ 1 ರವರನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಚಾಸ 1 ರವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. 1ನೇ ಆರೋಪಿಯು ಕೈಗಳಿಂದ ಚಾಸ 1 ರವರ ಬೆನ್ನಿನ ಮೇಲೆ ಗುದ್ದಿರುತ್ತಾರೆ ಎಂದರೆ ಸರಿಯಲ್ಲ.

2 ನೇ ಆರೋಪಿ ಚಾಸ 1 ರವರನ್ನು ಹಿಡಿದುಕೊಂಡಿದ್ದು, 3 ಮತ್ತು 4 ನೇ ಆರೋಪಿತರು ಕಾಲಿನಿಂದ ಚಾಸ 1 ರವರಿಗೆ ಒದ್ದು ಮೈ ಕೈ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ದೊಣ್ಣೆಯನ್ನು ತೆಗೆದುಕೊಂಡು ಬಂದು ಚಾಸ 1 ರವರ ಸೊಂಟಕ್ಕೆ ಹೊಡೆದ ಎಂದರೆ ಸರಿಯಲ್ಲ. ಬಿಡಿಸಲು ಬಂದ ಚಾಸ 2 ರವರನ್ನು 1 ನೇ ಆರೋಪಿ ಕೈಯಿಂದ ತಳ್ಳಿ ಬೀಳಿಸಿದ ಎಂದರೆ ಸರಿಯಲ್ಲ. ಬಿಡಿಸಲು ಬಂದ ನನಗೆ 1 ನೇ ಆರೋಪಿ ಅವಾಚ್ಯ ಶಬ್ದಗಳಿಂದ ನಿಂದಿಸಿದ ಎಂದರೆ ಸರಿಯಲ್ಲ. 1 ನೇ ಆರೋಪಿ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ದಿ:28.01.2021 ರಂದು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯವನ್ನು ನುಡಿದಿದ್ದರಿಂದ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು. ಆರೋಪಿತರೊಂದಿಗೆ ರಾಜಿ ಆಗಿದ್ದೇನೆ ಎಂದರೆ ಸರಿ. ರಾಜಿ ಆಗಿರುವ ಕಾರಣ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.</u>

<u>ಮರು ವಿಚಾರಣೆ: ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.